ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT SUBJECT: ರಾಜ್ಯಸಭೆ - ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE 20/6/20

**ರಾಜ್ಯಸಭೆ ಚುನಾವಣೆ: ಆಂಧ್ರದಲ್ಲಿ 4 ಸ್ಥಾನ ಗೆದ್ದ ವೈಎಸ್‌ಆರ್‌ಸಿಪಿ**

# ಬಿಜೆಪಿಗೆ 8, ಕಾಂಗ್ರೆಸ್‌ಗೆ 4 ಸ್ಥಾನ

20-6-2020

ಪ್ರಜಾವಾಣಿ ವಾರ್ತೆ

**ನವದೆಹಲಿ:** ರಾಜ್ಯಸಭೆಯ 19 ಸ್ಥಾನಗಳಿಗೆ ಶುಕ್ರವಾರ ನಡೆದ ಚುನಾವಣೆಯಲ್ಲಿ ಬಿಜೆಪಿ ಎಂಟು ಮತ್ತು ಹಾಗೂ ಕಾಂಗ್ರೆಸ್ ನಾಲ್ಕು ಸ್ಥಾನಗಳನ್ನು ಗೆದ್ದುಕೊಂಡವು.

ಮಧ್ಯಪ್ರದೇಶದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಕಾರಣವಾದ ಜ್ಯೋತಿರಾದಿತ್ಯ ಸಿಂಧಿಯಾ ಅದೇ ರಾಜ್ಯದಿಂದ ಅನಾಯಾಸವಾಗಿ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ. ರಾಜಸ್ಥಾನದಲ್ಲಿ ಆಪರೇಷನ್ ಕಮಲದ ಆತಂಕದಲ್ಲಿದ್ದ ಕಾಂಗ್ರೆಸ್ ಎರಡು ಸ್ಥಾನಗಳನ್ನು ಗಳಿಸುವ ಮೂಲಕ ನಿಟ್ಟುಸಿರು ಬಿಟ್ಟಿದೆ.

ಮಧ್ಯಪ್ರದೇಶದಲ್ಲಿ ಬಿಜೆಪಿಯ ಸುಮೇರ್ ಸಿಂಗ್ ಹಾಗೂ ಮಾಜಿ ಮುಖ್ಯಮಂತ್ರಿ, ಕಾಂಗ್ರೆಸ್ ಹಿರಿಯ ನಾಯಕ ದಿಗ್ವಿಜಯ್ ಸಿಂಗ್ ಆಯ್ಕೆಯಾಗಿದ್ದಾರೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದ ಉಸ್ತುವಾರಿಯಾಗಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರು ರಾಜಸ್ಥಾನದಲ್ಲಿ ಆಯ್ಕೆಯಾಗಿದ್ದಾರೆ. ಕಾಂಗ್ರೆಸ್‌ನ ನೀರಜ್ ದಾಂಗಿ ಹಾಗೂ ಬಿಜೆಪಿಯ ರಾಜೇಂದ್ರ ಗೆಹ್ಲೋಟ್ ಗೆದ್ದರು.

**ನಾಲ್ಕೂ ಸ್ಥಾನ ಗೆದ್ದ ವೈಎಸ್‌ಆರ್‌ಸಿಪಿ:** ಆಂಧ್ರಪ್ರದೇಶದ ನಾಲ್ಕೂ ಸ್ಥಾನಗಳನ್ನು ವೈಎಸ್‌ಆರ್‌ಸಿಪಿ ಗೆದ್ದುಕೊಂಡಿದೆ. ಸಚಿವರಾಗಿರುವ ಮೋಪಿದೇವಿ ವೆಂಕಟರಮಣ, ಪಿಳ್ಳಿ ಸುಭಾಷ್ ಚಂದ್ರ ಬೋಸ್, ಕೈಗಾರಿಕೋದ್ಯಮಿಗಳಾದ ಅಲ್ಲ ಅಯೋಧ್ಯ ರಾಮಿ ರೆಡ್ಡಿ ಹಾಗೂ ಪರಿಮಳ ನಥವಾಣಿ ರಾಜ್ಯಸಭೆಗೆ ಆಯ್ಕೆಯಾದರು.



ಕೋವಿಡ್–19ಗೆ ತುತ್ತಾಗಿರುವ ಮಧ್ಯಪ್ರದೇಶದ ಕಾಂಗ್ರೆಸ್ ಶಾಸಕ ಕುನಾಲ್ ಚೌಧರಿ ಪಿಪಿಇ ಕಿಟ್ ಧರಿಸಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು –ಪಿಟಿಐ ಚಿತ್ರ

**ಪಕ್ಷದ ಮುಖ್ಯಸ್ಥರು ರಾಜ್ಯಸಭೆಗೆ:** ಜೆಎಂಎಂ ಮುಖ್ಯಸ್ಥ ಶಿಬು ಸೊರೇನ್(30) ಹಾಗೂ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ದೀಪಕ್ ಪ್ರಕಾಶ್(31) ಜಾರ್ಖಂಡನ್‌ನಿಂದ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ. ಸೊರೇನ್, ರಾಜ್ಯಸಭೆಗೆ ಮೂರನೇ ಬಾರಿ ಪ್ರವೇಶಿಸುತ್ತಿದ್ದಾರೆ.

ಮಣಿಪುರದಲ್ಲಿ ಆಡಳಿತರೂಢ ಮೈತ್ರಿ ಕೂಟದಲ್ಲಿರುವ ಒಂಬತ್ತು ಶಾಸಕರು ಬಂಡಾಯವೆದ್ದಿದ್ದರೂ, ತನ್ನ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳುವಲ್ಲಿ ಬಿಜೆಪಿ ಸಫಲವಾಗಿದೆ. ಇಲ್ಲಿಂದ ಲಿಸೆಂಬಾ ಸಂಜೊಬಾ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ. ಈಶಾನ್ಯ ರಾಜ್ಯಗಳಾದ ಮೇಘಾಲಯದಲ್ಲಿ ನ್ಯಾಷನಲ್ ಪೀಪಲ್ ಪಕ್ಷದ ವ್ಯಾನ್‌ವಿರಾಯ್ ಖರ್ಲುಖಿ ಗೆದ್ದರೆ, ಮಿಜೋರಾಂನಿಂದ ಮಿಜೊ ನ್ಯಾಷನಲ್ ಫ್ರಂಟ್‌ನ ಅಭ್ಯರ್ಥಿ ಕೆ.ಕನ್ಲಾವೆನ ಆಯ್ಕೆಯಾದರು.

## ಗುಜರಾತ್: ಬಿಜೆಪಿಗೆ 3 ಸ್ಥಾನ

ಗುಜರಾತ್‌ನಿಂದ ಬಿಜೆಪಿಯ ಅಭಯ್ ಭಾರಧ್ವಾಜ್ ಹಾಗೂ ರಮಿಳ ಬರ, ನರ್ಹರಿ ಅಮಿನ್ ಹಾಗೂ ಕಾಂಗ್ರೆಸ್‌ನ ಶಕ್ತಿಸಿನ್ಹಾ ಗೋಹಿಲ್ ಆಯ್ಕೆಯಾದರು.

ಕಾಂಗ್ರೆಸ್‌ನಿಂದ ಸ್ಪರ್ಧಿಸಿದ್ದ ಭರತ್‌ಸಿನ್ಹಾ ಸೋಲಂಕಿ ಪರಾಭವಗೊಂಡರು.

**ಅಕ್ರಮ ಆರೋಪ:** ಇದಕ್ಕೂ ಮುನ್ನ ಮತದಾನ ಪ್ರಕ್ರಿಯೆಯಲ್ಲಿ ಅಕ್ರಮವಾಗಿದೆ ಎಂದು ಕಾಂಗ್ರೆಸ್ ಆರೋಪಿಸಿದ್ದು, ಫಲಿತಾಂಶ ಪ್ರಕಟಣೆ ವಿಳಂಬವಾಯಿತು.

ಗುಜರಾತ್‌ನಲ್ಲಿ ಪಕ್ಷದ ಶಾಸಕರ ರಾಜೀನಾಮೆಯಿಂದ ಆಘಾತ ಅನುಭವಿಸಿರುವ ಕಾಂಗ್ರೆಸ್‌ಗೆ, ಮತದಾನದ ವೇಳೆಯೂ ಮತ್ತೊಂದು ಆಘಾತ ಕಾದಿತ್ತು. ಭಾರತೀಯ ಟ್ರೈಬಲ್ ಪಕ್ಷದ ಇಬ್ಬರು ಶಾಸಕರು ಮತದಾನದಿಂದ ದೂರ ಉಳಿದಿದ್ದು, ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಮತ್ತಷ್ಟು ಸಹಕಾರಿಯಾಯಿತು.

Bengaluru